ಅನುಬಂಧ 1

ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

(ಅ) ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, "2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೇ,

"2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ "2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 2005.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"200ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "200ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ 3

(2) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

(ಅ) ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, "2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯಗೆಳ ವಿಧೇಯಕವನ್ನು ತಂದಿರುವ ಉದ್ದೇಶವೇನೆಂದರೆ, 2000ನೇ ಇಸವಿಯಲ್ಲಿ ವಿಧಾನಮಂಡಲದವರ ವೇತನಗಳು ಮತ್ತು ಭತ್ಯೆಗಳನ್ನು ಪರಿಷ್ಕರಿಸಲಾಗಿತ್ತು. ತರುವಾಯ ಜೀವನದ ವೆಚ್ಚಗಳು ಬಹಳಷ್ಟು ಎರಿವೆ. Petrol ಆಗಲಿ, Diesel ಆಗಲಿ, ಇತರೆ ವೆಚ್ಚಗಳ ಏರಿಕೆ ಹಾಗೂ ಹಣದ ಮೌಲ್ಯದಲ್ಲೂ ಆಗಿರತಕ್ಕ ಇಳಿತಾಯವನ್ನು ಗಮನಿಸಿ ಈ ವೇತನ ಮತ್ತು ಭತ್ಯೆಗಳ ಪರಿಷ್ಕರಣೆ ಉದ್ದೇಶದಿಂದ ಈ ಬಿಲ್ ಅನ್ನು ನಾವು ಈ ಸಂದರ್ಭದಲ್ಲಿ ತಂದಿದ್ದೇವೆ. ವಿಧಾನಮಂಡಲದಲ್ಲಿಯ Chairman, Deputy Chairman, Speakar, Deputy Spekar ನಮ್ಮ ಶಾಸಕರು, ವಿರೋಧ ಪಕ್ಷದ ನಾಯಕರು, Chief whip, ಹೀಗೆ ಇವರೆಲ್ಲರ ಸಂಬಳವನ್ನು Deputy Chairman, ರವರ ಸಂಬಳವನ್ನು 6 ಗಳಿಂದ 12 ಸಾವಿರ ರೂಪಾಯಿಗಳಿಗೆ Deputy Chairman, ರವರ ಸಂಬಳವನ್ನು 4 ಸಾವಿರ ರೂಪಾಯಿಗಳಿಂದ 8 ಸಾವಿರ ರೂಪಾಯಿಗಳಿಗೆ, Deputy Chairman, ಐದೂವರೆ ಸಾವಿರ ರೂಪಾಯಿಗಳಿಂದ 10 ಸಾವಿರ ರೂಪಾಯಿಗಳಿಗೆ, ಅದೇ ರೀತಿ ನಮ್ಮ ಶಾಸಕರ ಸಂಬಳವನ್ನು 8 ಸಾವಿರ ರೂಪಾಯಿಗಳಿಂದ ಸಾವಿರ ರೂಪಾಯಿಗಳಿಗೆ, ಹಾಗೆಯೇ Pension 2000 ರೂಪಾಯಿಗಳು Pension ಇದ್ದ ನಮ್ಮ ಮಾಜಿ ಶಾಸಕರಿಗೆ 5000 ರೂಪಾಯಿಗಳಿಗೆ ಎರಿಸುವುದರ ಜೊತೆಗೆ ಮಾಜಿ ಶಾಸಕರ ಕುಟುಂಬದ ಸದಸ್ಯರಿಗೂ ಸಹಿತ Medical facilities ಅನ್ನು extend ಮಾಡಿರತಕ್ಕಂಥ ಈ ಒಂದು ಮಸೂದೆಯನ್ನು ಈ ಸಂದರ್ಭದಲ್ಲಿ ತಮ್ಮೆದುರು ಮಂಡನೆ ಮಾಡಿದ್ದೇನೆ. ದಯಾಮಾಡಿ ಇದನ್ನು ಒಪ್ಪಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 18 ರವರೆಗೆ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ಖಂಡ 2ರಿಂದ 18ರ ವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2ರಿಂದ 18ರ ವರೆಗೆ, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು.)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

(ಪ್ರಸ್ತಾವದ ಅಂಗೀಕಾರ)

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

(2) ವಿದೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಆ) ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

ಪರ್ಯಾಲೋಚನಾ ಪ್ರಸ್ತಾವ